ಬೈಲಹೊಂಗಲ ತಾಲ್ಲೂಕಿನ ಪ್ರಥಮ ಪೂರ್ವ ಮಹಾವಿದ್ಯಾಲಯಕ್ಕೆ ವಿಜ್ಞಾನ ಉಪಕರಣಗಳ ಪೂರೈಕೆ

(1898): ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ):–

ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಪೈಕಿ ದೊಡ್ಡವಾಡ ಗ್ರಾಮದಲ್ಲಿ ಸರ್ಕಾರಿ ಸಂಯುಕ್ತ ಪಥವಿಪೂರ್ವ ಮಹಾವಿದ್ಯಾಲಯಕ್ಕೆ ಇದುವರೆವಿಗೂ ವಿಜ್ಞಾನ ಉಪಕರಣಗಳನ್ನು ಹಾಗೂ ಲೈಬ್ರರಿ ಪುಸ್ತಕಗಳನ್ನು ಪೂರೈಸದೆ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಆ ಮಹಾವಿದ್ಯಾಲಯಕ್ಕೆ ವಿಜ್ಞಾನ ಉಪಕರಣಗಳನ್ನು ಹಾಗೂ ಲೈಬ್ರರಿ ಪುಸ್ತಕಗಳನ್ನು ಪೂರೈಸಲು ಸರ್ಕಾರದವರು ಯಾವ ಕ್ರಮ ಕೈಗೊಂಡಿರುವರು ? ಮತ್ತು ಇನ್ನು ಎಷ್ಟು ದಿವಸಗಳಲ್ಲಿ ವಿಜ್ಞಾನ ಉಪಕರಣಗಳನ್ನು ಪೂರೈಸಲಾಗುವುದು;

ಇ) ವಿಜ್ಞಾನ ಉಪಕರಣಗಳನ್ನು ಪೂರೈಸದೆ ಇರುವುದರಿಂದ ಅಲ್ಲಿಯ ಪ್ರಾಕ್ಟಿಕಲ್ ಕ್ಲಾಸ್‌ಗಳು ನಡೆಯದೆ ಇದ್ದ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಈ) ವಿಜ್ಞಾನದ ಉಪಕರಣಗಳನ್ನು ಪೂರೈಸದೆ ಇರುವುದರಿಂದ ಅಲ್ಲಿಯ ವಿದ್ಯಾರ್ಥಿಗಳಿಗೆ ಪ್ರಾಕ್ಟಿಕಲ್ ಮಾಡಲು ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಡಾ. ಹೆಚ್.ಡಿ. ಲಮಾಣಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):–

ಅ) ಬಂದಿದೆ.

1991-92ರ ವರ್ಷದ ಅಂತ್ಯದಲ್ಲಿ ಈ ಕಾಲೇಜಿಗೆ ವಿಜ್ಞಾನ ವಿಭಾಗ ತೆರೆಯಲು ಅನುಮತಿ ನೀಡಿದೆ. 1992-93ರ ಸಾಲಿನಲ್ಲಿ ವಿಜ್ಞಾನ ಉಪಕರಣ; ಲೈಬ್ರರಿ ಪುಸ್ತಕ ಒದಗಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ವಿಜ್ಞಾನ ಉಪಕರಣಗಳನ್ನು ಹಾಗೂ ಲೈಬ್ರರಿ ಪುಸ್ತಕಗಳನ್ನು ಸಧ್ಯದಲ್ಲಿಯೇ ಪೂರೈಕೆ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಇ) ಬಂದಿದೆ.

ಈ) ಈ ಕೂಡಲೇ ಉಪಕರಣಗಳನ್ನು ಒದಗಿಸುವ ವ್ಯವಸ್ಥೆ ಮಾಡುತ್ತಿರುವುದರಿಂದ ಈ ತೊಂದರೆ ಇನ್ನು ಮುಂದೆ ಉದ್ಭವಿಸುವುದಿಲ್ಲ.

ದೊಡ್ಡವಾಡ ಗ್ರಾಮದ ಸರ್ಕಾರಿ ಸಂಯುಕ್ತ ಶಾಲೆಯಲ್ಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆ ಭರ್ತಿ

1313 (1898): ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ):–

ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?